**Akashvani : Bangalore**
**Regional Bulletin In Kannada**
**09.05.2025 / 14.30 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**09.05.2025 / 14.30 hrs**

**<><*<><>*><>**

ಮುಖ್ಯಾಂಶಗಳು

**೧. ಭಾರತೀಯ ಸೇನಾ ಕಾರ್ಯಾಚರಣೆ ಬೆಂಬಲಿಸಿ, ಬೆಂಗಳೂರಿನಲ್ಲಿಂದು ಮುಖ್ಯಮಂತ್ರಿ ನೇತೃತ್ವದಲ್ಲಿ ಜೈಹಿಂದ್ ತಿರಂಗಾ ಯಾತ್ರೆ - ಬೃಹತ್ ಸಂಖ್ಯೆಯಲ್ಲಿ ಜನರು ಭಾಗಿ**

**೨. ರಾಜ್ಯದ ವಿವಿಧ ನಗರಗಳಲ್ಲಿ ಕೇಂದ್ರ ಸರ್ಕಾರದ ನಿರ್ದೇಶನದಂತೆ ನಾಗರಿಕ ಸುರಕ್ಷತೆಯ ಅಣಕು ಅಭ್ಯಾಸ**

**೩. ಬೆಂಗಳೂರಿನಲ್ಲಿ ಸೆಪ್ಟೆಂಬರ್‌ನಲ್ಲಿ ಅಖಿಲ ಭಾರತ ಪೀಠಾಧ್ಯಕ್ಷರ ಸಮ್ಮೇಳನ - ವಿಧಾನಸಭಾಧ್ಯಕ್ಷ ಯು.ಟಿ. ಖಾದರ್**

**೪. ಬೆಂಗಳೂರಿನಲ್ಲಿ ಟ್ಯಾಂಕರ್ ಮೂಲಕ ಜನರ ಮನೆ ಬಾಗಿಲಿಗೆ ಶುದ್ಧ ಕುಡಿಯುವ ನೀರು ಪೂರೈಸುವ ಯೋಜನೆಗಳಿಗೆ ಉಪಮುಖ್ಯಮಂತ್ರಿ ಚಾಲನೆ**

**<><*<><>*><>**

ಪಹಲ್ಗಾಮ್ ಉಗ್ರಗಾಮಿ ಕೃತ್ಯಕ್ಕೆ ಪ್ರತಿಕಾರವಾಗಿ ಭಾರತೀಯ ಸೇನೆ ನಡೆಸುತ್ತಿರುವ "ಆಪರೇಷನ್ ಸಿಂಧೂರ" ಕಾರ್ಯಾಚರಣೆ ಬೆಂಬಲಿಸಿ ಬೆಂಗಳೂರಿನಲ್ಲಿಂದು ಬೃಹತ್ ಜೈಹಿಂದ್ ತಿರಂಗ ಯಾತ್ರೆ ನಡೆಯಿತು. ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದಲ್ಲಿ ಈ ಯಾತ್ರೆ ಜರುಗಿತು. ಬೆಂಗಳೂರ ನಗರದ ಕೆ.ಆರ್. ವೃತ್ತ ದಿಂದ ಮಿನ್ಸ್ ಚೌಕ್ ವರೆಗೆ ನಡೆದ ಈ ಯಾತ್ರೆಯಲ್ಲಿ ಅಬಾಲವೃದ್ಧರಾದಿಯಾಗಿ ರಾಷ್ಟ್ರಧ್ವಜವನ್ನು ಕೈಯಲ್ಲಿ ಹಿಡಿದು ಪ್ರದರ್ಶನ ನಡೆಸಿದರು. ಈ ಯಾತ್ರೆಯಲ್ಲಿ ಸಚಿವರಾದ ಎಚ್.ಕೆ. ಪಾಟೀಲ್, ಪರಮೇಶ್ವರ್, ಕೆ.ಎಚ್. ಮುನಿಯಪ್ಪ, ಮಹದೇವಪ್ಪ, ದಿನೇಶ್ ಗುಂಡೂರಾವ್, ಪ್ರಿಯಾಂಕ್ ಖರ್ಗೆ, ಡಾ. ಎಂ.ಸಿ. ಸುಧಾಕರ್ ಬೋಸರಾಜು, ವಿಧಾನಪರಿಷತ್ ಮುಖ್ಯ ಸಚೇತಕ ಸಲೀಂ ಅಹ್ಮದ್, ಸೇರಿದಂತೆ ವಿದ್ಯಾರ್ಥಿಗಳು, ಸರ್ಕಾರಿ ಅಧಿಕಾರಿಗಳು, ಸಿಬ್ಬಂದಿಗಳು ಮತ್ತು ಸಾರ್ವಜನಿಕರು ಭಾಗವಹಿಸಿದ್ದರು.

**<><*<><>*><>**

ಕೇಂದ್ರ ಸರ್ಕಾರದ ನಿರ್ದೇಶನದ ಮೇರೆಗೆ ರಾಜ್ಯದ ವಿವಿಧ ತಾಣಗಳಲ್ಲಿ ನಾಗರಿಕ ಸುರಕ್ಷತೆಯ ಅಣಕು ಅಭ್ಯಾಸಗಳನ್ನು ವ್ಯವಸ್ಥೆ ಮಾಡಲಾಗಿದೆ. ರಾಯಚೂರು ತಾಲೂಕಿನ ಶಕ್ತಿನಗರದ

ಆರ್‌ಟಿಪಿಎಸ್ ಆವರಣದಲ್ಲಿ, ಇಂದು ಸಂಜೆ ೪ ಗಂಟೆಗೆ ಕೇಂದ್ರ ಗೃಹ ಇಲಾಖೆ ಸೂಚನೆಯಂತೆ ಮಾಕ್ ಡ್ರಿಲ್ ಆಯೋಜಿಸಲಾಗಿದ್ದು, ನಾಗರಿಕರ ಸ್ವಯಂ ರಕ್ಷಣೆಯ ಅಣಕು ಕಾರ್ಯಾಚರಣೆ ನಡೆಯಲಿದೆ ಎಂದು ಜಿಲ್ಲಾಧಿಕಾರಿ ಕೆ.ನಿತೀಶ್ ತಿಳಿಸಿದ್ದಾರೆ. ಕೇಂದ್ರ ಗೃಹ ಸಚಿವಾಲಯ ಮಾಕ್ ಡ್ರಿಲ್ ಸೂಚನೆಯ ಹಿನ್ನೆಲೆಯಲ್ಲಿ ನಾಳೆ ಸಂಜೆ ೪ ಗಂಟೆಗೆ ಮೈಸೂರಿನ ಅರಮನೆ ಆವರಣದಲ್ಲಿ ನಾಗರಿಕ ರಕ್ಷಣಾ ಅಣಕು ಅಭ್ಯಾಸ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಜಿ. ಲಕ್ಷ್ಮೀಕಾಂತ ರೆಡ್ಡಿ ತಿಳಿಸಿದ್ದಾರೆ. ಈ ಕುರಿತಂತೆ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ಇದಕ್ಕೆ ಅಗತ್ಯವಾದ ಸಿದ್ಧತೆಗಳನ್ನು ಮಾಡಿಕೊಳ್ಳುವಂತೆ ಸಂಬಂದಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು. ಸಭೆಯಲ್ಲಿ ಮೈಸೂರು ನಗರ ಪೊಲೀಸ್ ಆಯುಕ್ತರಾದ ಸೀಮಾ ಲಾಟ್ಕರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ವಿಷ್ಣುವರ್ಧನ್, ಮೈಸೂರು ಮಹಾನಗರ ಪಾಲಿಕೆಯ ಆಯುಕ್ತರಾದ ಅಪರ ಜಿಲ್ಲಾಧಿಕಾರಿ ಡಾ. ಪಿ ಶಿವರಾಜು ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

<><*<><>*><>

ತುರ್ತು ಸಂದರ್ಭದಲ್ಲಿ ಪರಿಣಾಮಕಾರಿಯಾಗಿ ಸಾರ್ವಜನಿಕರು, ಪ್ರವಾಸಿಗರು, ಅಣೆಕಟ್ಟು ರಕ್ಷಣೆ ಮಾಡುವ ಕುರಿತಂತೆ *ಆಪರೇಷನ್ ಅಭ್ಯಾಸ್ ಅಣಕು ಪ್ರದರ್ಶನವನ್ನು* ಮಂಡ್ಯ ಜಿಲ್ಲೆಯ ಕೆ.ಆರ್.ಎಸ್ ಬೃಂದಾವನ ಉದ್ಯಾನವನದಲ್ಲಿ ಇದೇ ೧೧ರಂದು ಸಂಜೆ ೪ ಗಂಟೆಯಿಂದ ೬ ಗಂಟೆಯವರೆಗೆ ಅಣಕು ಪ್ರದರ್ಶನವನ್ನು ಹಮ್ಮಿಕೊಳ್ಳಲಾಗಿದೆ. ಇದು ಮಾತ್ರವಾಗಿದ್ದು ಸಾರ್ವಜನಿಕರು, ಪ್ರವಾಸಿಗರು ಆತಂಕ ಪಡುವ ಅಗತ್ಯವಿಲ್ಲ ಎಂದು ಜಿಲ್ಲಾಧಿಕಾರಿ ಡಾ.ಕುಮಾರ ಅವರು ತಿಳಿಸಿದ್ದಾರೆ. ಇಂದು ಮಂಡ್ಯ ನಗರದ ಜಿಲ್ಲಾ ಪಂಚಾಯತ್ ಕಾವೇರಿ ಸಭಾಂಗಣದಲ್ಲಿ ನಡೆದ ಪೂರ್ವಭಾವಿ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಬೆಂಕಿ ಅನಾಹುತಗಳು, ಅವಘಡ, ತುರ್ತು ಸಂದರ್ಭದಲ್ಲಿ ಜನರು ಗಾಬರಿ ಅಥವಾ ಆತಂಕಕ್ಕೆ ಒಳಗಾಗದಂತೆ ಆತ್ಮ ವಿಶ್ವಾಸ ತುಂಬಿ, ಅರಿವು ಮೂಡಿಸುವ ಉದ್ದೇಶದಿಂದ ಅಣುಕು ಪ್ರದರ್ಶನವನ್ನು ಆಯೋಜಿಸಲಾಗುತ್ತಿದೆ. ಅಣಕು ಕಾರ್ಯಚರಣೆ ಸಂದರ್ಭದಲ್ಲಿ ಜಿಲ್ಲೆಯ ಜನತೆ ಯಾವುದೇ ರೀತಿಯ ಗಾಬರಿ, ಆತಂಕಕ್ಕೆ ಒಳಗಾಗದೇ ಜಿಲ್ಲಾಡಳಿತದೊಂದಿಗೆ ಸಹಕಾರ ನೀಡಬೇಕು ಎಂದರು. ಕೆ.ಆರ್.ಎಸ್ ಅಣೆಕಟ್ಟಿನಲ್ಲಿ ಬೆಂಕಿ ಅವಘಡ ಕುರಿತು ಅಣುಕು ಪ್ರದರ್ಶನ ನಡೆಸಿ ಅರಿವು ಮೂಡಿಸುವ ಕಾರ್ಯಾಚರಣೆ ನಡೆಸಲಾಗುವುದು. ತುರ್ತು ಸಂದರ್ಭದಲ್ಲಿ ನಾಗರೀಕರ ರಕ್ಷಣೆ, ಜನರನ್ನು ಸುರಕ್ಷಿತ ಸ್ಥಳಕ್ಕೆ ಸ್ಥಳಾಂತರಿಸುವಿಕೆ, ಗಾಯಗೊಂಡವರಿಗೆ ಆಸ್ಪತ್ರೆಗೆ ಸ್ಥಳಾಂತರಿಸುವ ಕುರಿತಂತೆ,ಬ್ಲಾಕ್ ಔಟ್ ಚಟುವಟಿಕೆಗಳ ಅಣಕು ಕಾರ್ಯಚರಣೆ ಮಾಡಲಾಗುತ್ತದೆ ಎಂದು ಹೇಳಿದರು. ಅಣುಕು ಕಾರ್ಯಾಚರಣೆಗೆ ವಾರ್ನಿಂಗ್ ಟೀಂ, ಕಂಟ್ರೋಲ್ ರೂಂ, ಇವ್ಯಾಕುಯೇಷನ್ ಟೀಂ, ಅಗ್ನಿ ಶಾಮಕ ದಳ, ಎನ್.ಸಿ.ಸಿ. ತಂಡ, ಹೋಂ ಗಾರ್ಡ್, ಪೊಲೀಸ್ ಇಲಾಖೆ, ಪ್ರಥಮ ಚಿಕಿತ್ಸೆ, ವೈದ್ಯಕೀಯ ತಂಡ, ಸಾರಿಗೆ ತಂಡ, ಸಂವಾಹನ ತಂಡಗಳನ್ನು ರಚಿಸಿ ಅಧಿಕಾರಿಗಳಿಗೆ ಜವಾಬ್ದಾರಿ ಗಳನ್ನು ವಹಿಸಲಾಯಿತು. ಜಿಲ್ಲಾ ಪೊಲೀಸ್

ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ ಅವರು ಮಾತನಾಡಿ, ಮೇ ೧೧ ರಂದು ನಡೆಯುವ ಅಣುಕು ಪ್ರದರ್ಶನದ ಬಗ್ಗೆ ಕೆಆರ್ ಎಸ್ ಗೆ ಆಗಮಿಸುವ ಪ್ರವಾಸಿಗರು ಹಾಗೂ ಸುತ್ತಮುತ್ತಲಿನ ಗ್ರಾಮದವರಿಗೆ ಮಾಹಿತಿ ನೀಡಿ ಅರಿವು ಮೂಡಿಸಬೇಕು. ಪ್ರವಾಸಿಗರಿಗೆ ಧ್ವನಿವರ್ಧಕದ ಮೂಲಕ ಹೆಚ್ಚಿನ ಪ್ರಚಾರವನ್ನು ನೀಡುವಂತೆ ತಿಳಿಸಿದರು. ಸಭೆಯಲ್ಲಿ ಅಣುಕು ಪ್ರದರ್ಶನದ ನೋಡಲ್ ಅಧಿಕಾರಿ ಕೆ.ಎಸ್ ಶಿವಶಂಕರ್, ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ತಿಮ್ಮಯ್ಯ, ಅಗ್ನಿ ಶಾಮಕ ಅಧಿಕಾರಿ ರಾಘವೇಂದ್ರ ಸೇರಿದಂತೆ ಇನ್ನಿತರೆ ಅಧಿಕಾರಿಗಳು ಉಪಸ್ಥಿತರಿದ್ದರು.

**<><*<><>*><>**

ರಾಜ್ಯದಲ್ಲಿ ಇದೇ ಮೊದಲ ಬಾರಿಗೆ ಸೆಪ್ಟೆಂಬರ್ ೮ರಿಂದ ೧೧ರವರೆಗೆ ಕಾಮನ್‌ವೆಲ್ತ್ ಪಾರ್ಲಿಮೆಂಟರಿ ಆಸೋಸಿಯೇಶನ್‌ನ ಅಖಿಲ ಭಾರತ ಸ್ಪೀಕರ್‌ಗಳ ಸಮ್ಮೇಳನವನ್ನು ಬೆಂಗಳೂರಿನಲ್ಲಿ ಆಯೋಜಿಸಲಾಗಿದೆ ಎಂದು ವಿಧಾನಸಭಾ ಅಧ್ಯಕ್ಷ ಯು.ಟಿ.ಖಾದರ್ ತಿಳಿಸಿದ್ದಾರೆ. ಮಂಗಳೂರಿನಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಲೋಕಸಭಾ ಸ್ಪೀಕರ್ ಅವರು ಕರ್ನಾಟಕದಲ್ಲಿ ಈ ಬಾರಿ ನಡೆಸಲು ಅವಕಾಶ ನೀಡಿದ್ದಾರೆ. ಸಮ್ಮೇಳನವನ್ನು ಉತ್ತಮ ರೀತಿಯಲ್ಲಿ ಸಂಘಟಿಸಲು ಸಕಲ ಸಿದ್ಧತೆ ಮಾಡಲಾಗುತ್ತಿದೆ ಎಂದರು. ದೇಶದ ಎಲ್ಲಾ ರಾಜ್ಯಗಳ ವಿಧಾನಸಭೆ ಮತ್ತು ವಿಧಾನ ಪರಿಷತ್ತುಗಳ ಸ್ಪೀಕರ್, ಡೆಪ್ಯುಟಿ ಸ್ಪೀಕರ್‌ಗಳು, ಕಾರ್ಯದರ್ಶಿಗಳು ಸೇರಿದಂತೆ ೩೦೦ ಮಂದಿ ಭಾಗವಹಿಸಲಿದ್ದಾರೆ. ಸೆಪ್ಟೆಂಬರ್. ೮ರಂದು ಸಂಜೆ ೬ ಗಂಟೆಗೆ ವಿಧಾನಸೌಧದಲ್ಲಿ ಮುಖ್ಯಮಂತ್ರಿ, ಉಪ ಮುಖ್ಯಮಂತ್ರಿಗಳ ಉಪಸ್ಥಿತಿಯಲ್ಲಿ ಈ ಸಮ್ಮೇಳನಕ್ಕೆ ಚಾಲನೆ ದೊರೆಯಲಿದೆ. ಲೋಕಸಭೆ ಸ್ಪೀಕರ್, ರಾಷ್ಟ್ರಪತಿ, ಉಪ ರಾಷ್ಟ್ರಪತಿ ಸೇರಿ ದಂತೆ ಇತರ ಹಲವು ಗಣ್ಯರು ಸಮಾವೇಶದಲ್ಲಿ ಭಾಗವಹಿಸಲಿದ್ದಾರೆ. ಕಳೆದ ವರ್ಷ ಹೊಸದಿಲ್ಲಿಯಲ್ಲಿ ಈ ಸಮಾವೇಶ ನಡೆದಿದ್ದರೆ, ಅದಕ್ಕಿಂತ ಹಿಂದಿನ ವರ್ಷ ರಾಜಸ್ತಾನದಲ್ಲಿ ನಡೆದಿತ್ತು. ಈ ಸಮ್ಮೇಳನವನ್ನು ಮಾದರಿಯಾಗಿ ನಡೆಸಲಾಗುವುದು ಎಂದು ಸ್ಪೀಕರ್ ಖಾದರ್ ಹೇಳಿದರು. ಸಂಸದೀಯ ಪ್ರಕ್ರಿಯೆಗಳನ್ನು ಬಲಪಡಿಸುವುದು, ಸ್ಪೀಕರ್‌ಗಳ ಪಾತ್ರ, ಪ್ರಸಕ್ತ ವಿಚಾರಗಳಿಗೆ ಸಂಬಂಧಿಸಿ ಚರ್ಚೆ ನಡೆಯಲಿದೆ ಎಂದು ಅವರು ಹೇಳಿದರು.

**<><*<><>*><>**

ಬೆಂಗಳೂರು ಜಲಮಂಡಳಿಯಿಂದ ಟ್ಯಾಂಕರ್ ಮೂಲಕ ಜನರ ಮನೆ ಬಾಗಿಲಿಗೆ ಶುದ್ಧ ಕುಡಿಯುವ ನೀರು ಪೂರೈಸುವ "ಸರ್ವರಿಗೂ ಸಂಚಾರಿ ಕಾವೇರಿ", "ಮನೆ ಬಾಗಿಲಿಗೆ ಸರಳ ಕಾವೇರಿ" ಯೋಜನೆಗಳಿಗೆ ನಗರಾಭಿವೃದ್ಧಿ ಸಚಿವರೂ ಆಗಿರುವ ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಇಂದು ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಶಾಸಕರಾದ ರಿಜ್ವಾನ್ ಅರ್ಷದ್, ಎಸ್ ಟಿ ಸೋಮಶೇಖರ್, ಎ ಸಿ ಶ್ರೀನಿವಾಸ್, ಬಿ ಡಬ್ಲ್ಯೂ ಎಸ್ ಎಸ್ ಬಿ ಅಧ್ಯಕ್ಷ ರಾಮ್ ಪ್ರಸಾತ್ ಮನೋಹರ್ ಉಪಸ್ಥಿತರಿದ್ದರು.

**<><*<><>*><>**

ಪಾಕ್ ಉಗ್ರರ ವಿರುದ್ಧ ಭಾರತೀಯ ಸೇನೆ ನಡೆಸಿದ ಆಪರೇಷನ್ ಸಿಂಧೂರ ಏರ್‌ಸ್ಟ್ರೈಕ್ ಯಶಸ್ವಿ ಕಾರ್ಯಾಚರಣೆಯ ವಿವರಗಳನ್ನು ಮಾಧ್ಯಮದ ಮುಂದೆ ಎಳೆ ಎಳೆಯಾಗಿ ಬಿಚ್ಚಿಟ್ಟ ಕರ್ನಲ್ ಸೋಫಿಯಾ ಕುರೇಷಿ ಬೆಳಗಾವಿಯ ಸೊಸೆಯಾಗಿದ್ದಾರೆ. ಬಹುರಾಷ್ಟ್ರೀಯ ಸೇನಾ ತುಕಡಿಯನ್ನು ಮುನ್ನಡೆಸಿದ ಮೊದಲ ಭಾರತೀಯ ಮಹಿಳಾ ಅಧಿಕಾರಿ ಎಂಬ ಹೆಗ್ಗಳಿಕೆಗೆ ಪಾತ್ರರಾಗಿರುವ ಕರ್ನಲ್ ಸೋಫಿಯಾ ಕುರೇಷಿ ಬೆಳಗಾವಿ ಜಿಲ್ಲೆಯ ಗೋಕಾಕ ತಾಲೂಕಿನ ಕೊಣ್ಣೂರು ಗ್ರಾಮದ ಕರ್ನಲ್ ತಾಜುದ್ದೀನ್ ಬಾಗೇವಾಡಿ ಅವರ ಪತ್ನಿಯಾಗಿದ್ದಾರೆ. ಸೊಸೆಯ ಸಾಧನೆಯ ಬಗ್ಗೆ ಜನರು ಮೆಚ್ಚುಗೆ ವ್ಯಕ್ತಪಡಿಸಿದ ಹಿನ್ನೆಲೆಯಲ್ಲಿ ಸೋಫಿಯಾ ಕುರೇಷಿ ಮಾವ ಗೌಸಸಾಬ್ ಬಾಗೇವಾಡಿ ಅವರು ಆಕಾಶವಾಣಿಯೊಂದಿಗೆ ಮಾತನಾಡಿ, ಮಗ ಮತ್ತು ಸೊಸೆ ಕರ್ನಾಟಕದ ಗೌರವ ಹೆಚ್ಚಿಸಿದ್ದಾರೆ ಎಂದು ಹೆಮ್ಮೆ ವ್ಯಕ್ತಪಡಿಸಿದ್ದಾರೆ.

******ಧ್ವನಿ**** ಗೌಸಸಾಬ್ ಬಾಗೇವಾಡಿ ( ೨೫ ಸೆಕೆಂಡ್ಸ್ )**

**<><*<><>*><>**

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ರೈತರಿಗೆ ಪ್ರಸ್ತುತ ಮಾವು ಮತ್ತು ಹಲಸು ಹಂಗಾಮಿನಲ್ಲಿ ಉತ್ತಮ ಬೆಲೆ ಸಿಗುವಂತೆ ಮಾಡುವ ನಿಟ್ಟಿನಲ್ಲಿ ತೋಟಗಾರಿಕೆ ಇಲಾಖೆ ವತಿಯಿಂದ "ಮಾವು ಮತ್ತು ಹಲಸು ಪ್ರದರ್ಶನ ಮತ್ತು ಮಾರಾಟ ಮೇಳ' ವನ್ನು ಆಯೋಜಿಸಲು ಉದ್ದೇಶಿಸಲಾಗಿದೆ. ರೈತರು ಇದೇ ೧೪ರ ವರೆಗೆ ಹತ್ತಿರದ ತಾಲೂಕು ತೋಟಗಾರಿಕೆ ಕಛೇರಿಯಲ್ಲಿ ನೊಂದಾಯಿಸಿಕೊಳ್ಳಬೇಕಿದೆ. ಈ ಮೇಳದಲ್ಲಿ ಸುಮಾರು ೫೦ ಕ್ಕೂ ಹೆಚ್ಚು ವಿವಿಧ ಮಾವು ತಳಿ, ಹಲಸು ತಳಿ ಪ್ರದರ್ಶನ ಮತ್ತು ಮಾರಾಟದ ವ್ಯವಸ್ಥೆಯನ್ನು ಹಮ್ಮಿಕೊಂಡು ರೈತರಿಂದ ನೇರವಾಗಿ ಖರೀದಿಸಲು ಅವಕಾಶ ಕಲ್ಪಿಸಲಾಗುವುದು ಎಂದು ಜಿಲ್ಲಾ ತೋಟಗಾರಿಕೆ ಅಧಿಕಾರಿಗಳು ತಿಳಿಸಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>**